6

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 5/2/2020

ಸಂಪುಟ ಪುನಾರಚನೆ ಇಲ್ಲ

ಉ.ವಾ 5/2/20 3

ಬೆಂಗಳೂರು: ಸದ್ಯಕ್ಕೆ ಸಂಪುಟ ವಿಸ್ತರಣೆಯಷ್ಟೇ ಆಗಲಿದ್ದು, ಎಲ್ಲ ಸಚಿವರು ಉತ್ತಮವಾಗಿ ಕಾರ್ಯ ನಿರ್ವಹಿಸುವ ಮೂಲಕ ಸರ್ಕಾರ ಹಾಗೂ ಪಕ್ಷಕ್ಕೆ ಉತ್ತಮ ಹೆಸರು ತರಲು ಪ್ರಯತ್ನಿಸಬೇಕು ಎಂದು ಸಿಎಂ ಯಡಿಯೂರಪ್ಪ ಸಂಪುಟ ಸಹೋದ್ಯೋಗಿಗಳಿಗೆ ಹೇಳಿದ್ದಾರೆ ಎನ್ನಲಾಗಿದೆ.

ವಿಧಾನಸೌಧದಲ್ಲಿ ಮಂಗಳವಾರ ನಡೆದ ಸಚಿವ ಸಂಪುಟ ಸಭೆ ವೇಳೆ ಈ ವಿಚಾರ ಪ್ರಸ್ತಾಪಿಸಿದ ಯಡಿಯೂರಪ್ಪ ಅವರು, ಸಂಪುಟ ವಿಸ್ತರಣೆಯಾಗಲಿದ್ದು ಹೊಸಬರು ಸಂಪುಟ ಸೇರಲಿದ್ದಾರೆ. ಮುಂದೆ ಹೈಕಮಾಂಡ್ ಸೂಚನೆ ನೀಡಿದಾಗ ಸಂಪುಟ ಪುನಾರಚನೆಯಾಗಬಹುದು. ಹಾಗಾಗಿ ಎಲ್ಲ ಸಚಿವರು ತಮಗೆ ವಹಿಸಿರುವ ಜವಾಬ್ದಾರಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಒತ್ತು ನೀಡಬೇಕು ಎಂದು ಹೇಳಿದರು ಎಂದು ಹೇಳಲಾಗಿದೆ.

ಆಡಳಿತವನ್ನು ಇನ್ನಷ್ಟು ಜನಸ್ನೇಹಿಯಾಗಿಸುವ ನಿಟ್ಟಿನಲ್ಲಿ ಕಾರ್ಯ ಪ್ರವೃತ್ತರಾಗಬೇಕು. ಅನಗತ್ಯ ವಿಚಾರಗಳು, ಗೊಂದಲಗಳ ಬಗ್ಗೆ ತಲೆ ಕೆಡಿಸಿಕೊಳ್ಳಬಾರದು. ತಮಗೆ ವಹಿಸಿರುವ ಖಾತೆಗಳನ್ನು ಸಮರ್ಪಕವಾಗಿ ನಿಭಾಯಿಸುವ ಮೂಲಕ ಜನರಿಗೆ ಅನುಕೂಲವಾಗುವಂತೆ ಕಾರ್ಯನಿರ್ವಹಿಸಬೇಕು ಎಂಬುದಾಗಿ ಕಿವಿಮಾತು ಹೇಳಿದ್ದಾರೆ ಎಂದು ಗೊತ್ತಾಗಿದೆ.